# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1129 |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 23.02.2024. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದಲ್ಲಿ ಖಾಲಿಯಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿ ಗ್ರೇಡ್-1, ಕಾರ್ಯದರ್ಶಿ ಗ್ರೇಡ್-2 ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳು ಎಷ್ಟು; ಈ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮಗಳೇನು;</td><td>
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯತಿಗಳಿಗೆ ಮಂಜೂರಾದ, ಭರ್ತಿಯಾದ ಮತ್ತು ಖಾಲಿಯಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಮತ್ತು ಗ್ರೇಡ್-2 ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವಿವರ ಈ ಕೆಳಕಂಡಂತಿದೆ.
<table>
<tr><th>ಹುದ್ದೆ</th><th>ಮಂಜೂರಾದ ಹುದ್ದೆಗಳ ಸಂಖ್ಯೆ</th><th>ಭರ್ತಿಯಾದ ಹುದ್ದೆಗಳ ಸಂಖ್ಯೆ</th><th>ಖಾಲಿ ಇರುವ ಹುದ್ದೆಗಳ ಸಂಖ್ಯೆ</th></tr>
<tr><td>ಪಂಚಾಯತಿ ಅಭಿವೃದ್ಧಿ ಅಧಿಕಾರಿ</td><td>6021</td><td>5208</td><td>813</td></tr>
<tr><td>ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1</td><td>2194</td><td>1607</td><td>587</td></tr>
<tr><td>ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2</td><td>3827</td><td>3201</td><td>626</td></tr>
<tr><td>ದ್ವಿತೀಯ ದರ್ಜೆ ಲೆಕ್ಕ ಸಹಾಯಕ</td><td>2579</td><td>2305</td><td>274</td></tr>
</table>
ಖಾಲಿ ಇರುವ ಗ್ರಾಮ ಪಂಚಾಯಿತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಸಮೀಪದಲ್ಲಿರುವ ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ/ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ನೌಕರರಿಗೆ ಅಧಿಕ ಪ್ರಭಾರ ವಹಿಸಲು ನಿರ್ದೇಶನ ನೀಡಲಾಗಿದೆ.<br><br>
ನೇರ ನೇಮಕಾತಿ ಕೋಟಾದಡಿ ಖಾಲಿಯಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ 256 ಹುದ್ದೆಗಳು, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ವೃಂದದ 220 ಹುದ್ದೆಗಳು,ಗ್ರಾಮ ಪಂಚಾಯತಿ ಕಾರ್ಯದರ್ಶೀ ಗ್ರೇಡ್-2 ವೃಂದದ 343 ಹುದ್ದೆಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ 105 ಹುದ್ದೆಗಳಿಗೆ ನೇಮಕಾತಿ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.<br><br>
ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ನೀಡಲು ಕ್ರಮ ವಹಿಸಲಾಗುತ್ತಿದೆ.<br><br>
ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಮತ್ತು ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ ಹುದ್ದೆಗಳನ್ನು ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಭರ್ತಿ ಮಾಡಲು ಕ್ರಮ ಕೈಗೊಳ್ಳುವಂತೆ ಸರ್ಕಾರದಿಂದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.
</td></tr>
</table>

| | | |
|---|---|---|
| (ಆ) | ಸದರಿ ಹುದ್ದೆಗಳ ನೇಮಕಾತಿಗಾಗಿ ನಿಗಧಿಪಡಿಸಿರುವ ಪಠ್ಯಕ್ರಮದ ಕುರಿತು ಸ್ಪಷ್ಟ ಮಾಹಿತಿಯನ್ನು ನೀಡುವುದು; | ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ (ಗ್ರೇಡ್-1 ಮತ್ತು ಗ್ರೇಡ್-2) ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ ನೇರ ನೇಮಕಾತಿ ಕೋಟಾದ ಹುದ್ದೆಗಳಿಗೆ ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು, 2021 ರನ್ವಯ ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಆಯ್ಕೆ ಮಾಡಲು ಉದ್ದೇಶಿಸಿರುವುದರಿಂದ ಗ್ರೂಪ್-ಸಿ ಹುದ್ದೆಗಳಿಗೆ ಸಂಬಂಧಿಸಿದಂತೆ ನಿಗದಿಪಡಿಸಿರುವ ಪಠ್ಯಕ್ರಮ ಈ ಕೆಳಕಂಡಂತಿದೆ.<br>ಪತ್ರಿಕೆ-1.- ಸಾಮಾನ್ಯ ಜ್ಞಾನ,<br>ಪತ್ರಿಕೆ-2.- 1) ಸಾಮಾನ್ಯ ಕನ್ನಡ 2) ಸಾಮಾನ್ಯ ಇಂಗ್ಲೀಷ್ 3) ಕಂಪ್ಯೂಟರ್ ಜ್ಞಾನ. |
| (ಇ) | ಯಾವ ಕಾಲಮಿತಿಯಲ್ಲಿ ಈ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು? | ಕಾಲಮಿತಿ ನಿಗದಿಪಡಿಸಿರುವುದಿಲ್ಲ. |

ಸಂಖ್ಯೆ: ಗ್ರಾಅಪ 110 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.